# ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.
## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,

ಸಂ:ಉನಿಚಿ/ಮಮಅಇ/ಅಂ.ಕಾ/ಅಂ.ಸ/2021-22

ಉಪನಿರ್ದೇಶಕರ ಕಛೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ನೂತನ ಜಿಲ್ಲಾಡಳಿತ ಭವನ
ಕೊಠಡಿ ಸಂ:ಎಫ್.ಬಿ-5&6, 1ನೇ ಮಹಡಿ
ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ
ದಿನಾಂಕ:26.10.2021

# ಅಧಿಸೂಚನೆ

ಚಿಕ್ಕಬಳ್ಳಾಪುರ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 6 ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ 06 ಮಿನಿ ಅಂಗನವಾಡಿ ಕಾರ್ಯಕರ್ತೆ, 06 ಅಂಗನವಾಡಿ ಕಾರ್ಯಕರ್ತೆ ಮತ್ತು 84 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಈ ಸಂಬಂಧ ಹೆಚ್ಚಿನ ವಿವರಗಳಿಗೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಲು ಕೋರಿದೆ.

| | |
|---|---|
| ಅರ್ಜಿ ಸಲ್ಲುಸಲು ನಿಗದಿಪಡಿಸಿದ ಪ್ರಾರಂಭದ ದಿನಾಂಕ | 28.10.2021 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 29.11.2021 ಸಂಜೆ:5.30 ಘಂಟೆಗೆ |
| ವೆಬ್ ಸೈಟ್ ವಿಳಾಸ | **http://anganwadirecruit.kar.nic.in** |

**ಸೂಚನೆಗಳು:-**

1. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳಿಗೆ ಆನ್‌ಲೈನ್(Online)ನಲ್ಲಿ ಸಲ್ಲಿಸಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು.
2. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮೊದಲು ಈ ಕೆಳಗಿನ ನೇಮಕಾತಿಯ ಮಾರ್ಗಸೂಚಿ/ ನಿಬಂಧನೆಗಳನ್ನು ಸ್ಪಷ್ಟವಾಗಿ ಓದಿಕೊಂಡು ನೀಡಲಾಗಿರುವ ಸೂಚನೆಯಂತೆ ಅರ್ಜಿಗಳನ್ನು ಭರ್ತಿ ಮಾಡಿ ಅವಶ್ಯಕ ದೃಢಿಕೃತ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಿ ಅರ್ಜಿ ಸಲ್ಲಿಸುವುದು.
3. ಆನ್‌ಲೈನ್(Online) ಮೂಲಕವೇ ಎಲ್ಲಾ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವುದು. ತದನಂತರ ಸಲ್ಲಿಸುವ ದಾಖಲಾತಿಗಳನ್ನು ಪರಿಗಣಿಸಲಾಗುವುದಿಲ್ಲ.
4. ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಅಭ್ಯರ್ಥಿಗಳಿಗೆ 18 ವರ್ಷ ಪೂರ್ಣಗೊಂಡಿರಬೇಕು ಹಾಗೂ 35 ವರ್ಷ ಮೀರಿರಬಾರದು.
5. ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ನೇಮಕಾತಿ ನಿಯಮಗಳ ಮಾರ್ಗಸೂಚಿ ಸಂಖ್ಯೆ: ಮಮಇ 303 ಐಸಿಡಿ 2017 ದಿನಾಂಕ: 23.09.2017 ಮತ್ತು ತಿದ್ದುಪಡಿ ಮಾರ್ಗಸೂಚಿಗಳ ಸಂಖ್ಯೆ: ಮಮಅಇ/ ಐಸಿಡಿ/ ಎಎನ್‌ಜಿ-1/ 91/ 2018-19 ದಿನಾಂಕ:12.07.2021 ರಂತೆ ಅರ್ಜಿ ಅಹ್ವಾನಿಸಿದೆ.

**ಉಪನಿರ್ದೇಶಕರು**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,**
**ಜಿಲ್ಲಾ ಕಛೇರಿ, ಚಿಕ್ಕಬಳ್ಳಾಪುರ**

Com-4/Md.usman sir/AWW AWH Appointment Notification

# ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.
## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.

ಸಂ:ಉನಿಚಿ/ಮಮಅಇ/ಅಂ.ಕಾ/ಅಂ.ಸ/2021-22

ಉಪನಿರ್ದೇಶಕರ ಕಛೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ನೂತನ ಜಿಲ್ಲಾಡಳಿತ ಭವನ
ಕೊಠಡಿ ಸಂ:ಎಫ್.ಬಿ-5&6, 1ನೇ ಮಹಡಿ
ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ
ದಿನಾಂಕ:26.10.2021

**ವಿಷಯ:-** ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಹುದ್ದೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸುವ ಬಗ್ಗೆ.

**ಉಲ್ಲೇಖ:-** ಸರ್ಕಾರಿ ಆದೇಶದ ಸಂ:ಮಮಇ/303/ಐಸಿಡಿ/2017 ಬೆಂಗಳೂರು ದಿನಾಂಕ: 23.09.2017

* * * * * * *

ಚಿಕ್ಕಬಳ್ಳಾಪುರ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 6 ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯ ಈ ಕೆಳಗೆ ಕಾಣಿಸಲಾದ ಗ್ರಾಮಗಳ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಕಾರ್ಯಕರ್ತೆ ಹಾಗೂ ಸಹಾಯಕಿಯಾಗಿ ಗೌರವಸೇವೆ ಸಲ್ಲಿಸಲು ಈ ಕೆಳಗೆ ತೋರಿಸಲಾದ ಮಿಸಲಾತಿ ಹೊಂದಿದ 18 ರಿಂದ 35 ವರ್ಷದೊಳಗಿನ ಅರ್ಹ ಸ್ಥಳೀಯ (ಅದೇ ಗ್ರಾಮದ) ಮಹಿಳಾ ಅಭ್ಯರ್ಥಿಗಳಿಂದ ಮಾತ್ರ ಈ ಕೆಳಗೆ ತೋರಿಸಲಾದ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆಯಾಗಲು ಎಸ್.ಎಸ್.ಎಲ್.ಸಿ ತೇರ್ಗಡೆಯಾಗಿರಬೇಕು. ಅಂಗನವಾಡಿ ಸಹಾಯಕಿಯಾಗಲು ಕನಿಷ್ಟ 4ನೇ ತರಗತಿ ತೇರ್ಗಡೆಯಾಗಿದ್ದು, ಗರಿಷ್ಠ ವಿದ್ಯಾರ್ಹತೆ 9ನೇ ತರಗತಿ ತೇರ್ಗಡೆಯಾಗಿರಬೇಕು. ಈ ಕೆಳಗೆ ತೋರಿಸಲಾದ ಎಲ್ಲಾ ದಾಖಲೆಗಳೊಂದಿಗೆ ಸಂಬಂಧಿತರು ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:29.11.2021ರ ಸಂಜೆ:5.30ಗಂಟೆಯೊಳಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಿದೆ.

## ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:

1) ಅರ್ಜಿ ನಿಗದಿತ ನಮೂನೆಯಲ್ಲಿ (ಆನ್‌ಲೈನ್)
2) ಧೃಢೀಕೃತ ಜನನ ಪ್ರಮಾಣ ಪತ್ರ/ಜನ್ಮದಿನಾಂಕ ಇರುವ ಎಸ್.ಎಸ್.ಎಲ್.ಸಿ. ಅಂಕಪಟ್ಟಿ/ಜನ್ಮ ದಿನಾಂಕ ಇರುವ ಶಾಲಾ ಪ್ರಮಾಣ ಪತ್ರ.
3) ನಿಗದಿತ ವಿದ್ಯಾರ್ಹತೆಯ ಧೃಢೀಕೃತ ಅಂಕಪಟ್ಟಿ.
4) ಅಭ್ಯರ್ಥಿಯು ಅದೇ ಗ್ರಾಮದಲ್ಲಿ (ನಗರ ಪ್ರದೇಶವಾಗಿದ್ದಲ್ಲಿ ಅದೇ ವಾರ್ಡ್‌ನಲ್ಲಿ) ವಾಸ್ತವ್ಯವಿರುವ ಬಗ್ಗೆ ತಹಶೀಲ್ದಾರರು/ಉಪ ತಹಶೀಲ್ದಾರರಿಂದ ಪಡೆದ ಮೂರು (03) ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ.
5) ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.(ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಾತ್ರ)
6) ವಿಧವೆಯಾಗಿದ್ದಲ್ಲಿ ಪತಿಯ ಮರಣ ಪ್ರಮಾಣ ಪತ್ರ.(ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)
7) ಅಭ್ಯರ್ಥಿಯು ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿಯಾಗಿದ್ದಲ್ಲಿ ಉಪವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.

8) ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರು ಅಂಗವಿಕಲರಾಗಿದ್ದಲ್ಲಿ ದೈಹಿಕ ಅಂಗವೈಕಲ್ಯತೆ ಶೇ.60% ಮೀರದಂತೆ ಇರುವವರು ಅರ್ಜಿ ಸಲ್ಲಿಸಬಹುದು. ಅಂಗವಿಕಲತೆ ಪ್ರಮಾಣ ಪತ್ರ (ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)

9) ಅಭ್ಯರ್ಥಿಯು ವಿಚ್ಛೇದಿತರಾಗಿದ್ದಲ್ಲಿ, ವಿಚ್ಛೇದನಾ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು)

10) ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಅರ್ಜಿ ಸಲ್ಲಿಸಿದಲ್ಲಿ ಈ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.

11) ಅಭ್ಯರ್ಥಿಯು ಪರಿತ್ಯಕ್ತೆಯಾಗಿದ್ದಲ್ಲಿ, ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ.

12) ಅಭ್ಯರ್ಥಿಯ ಇಲಾಖೆಯ ಸುಧಾರಣಾ ಸಂಸ್ಥೆ/ ರಾಜ್ಯ ಮಹಿಳಾ ನಿಲಯಗಳ ನಿವಾಸಿಯಾಗಿದ್ದಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ, (ವಾಸಸ್ಥಳ ಧೃಢೀಕರಣ ಪತ್ರ ಕಡ್ಡಾಯ ಇರುವುದಿಲ್ಲ)

13) ಅಭ್ಯರ್ಥಿಯು ಯೋಜನಾ ನಿರಾಶ್ರಿತರಾಗಿದ್ದಲ್ಲಿ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.

14) ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿ ಆಗಿದ್ದಲ್ಲಿ, ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಆಯ್ಕೆಯಾದಲ್ಲಿ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕಿರುತ್ತದೆ.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಜಿಲ್ಲಾ ಕಛೇರಿ, ಚಿಕ್ಕಬಳ್ಳಾಪುರ